21-3-22 32

## ಶ್ರೀ ಯು. ಬಿ. ವೆಂಕಟೇಶ್, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು, ಇವರು ನಿಯಮ 72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮುಖ್ಯಮಂತ್ರಿಯವರ ಉತ್ತರ

**ಸೂಚನೆ:**

ಹೈದ್ರಾಬಾದ್-ಕರ್ನಾಟಕ ಭಾಗದ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಉದ್ಯೋಗದಲ್ಲಿ ಮೀಸಲಾತಿ ಪ್ರಮಾಣ ಶೇಕಡ 100ಕ್ಕೆ 100ರಷ್ಟು ಹಾಗು ಉಳಿದ ಜಿಲ್ಲೆಗಳಲ್ಲಿ ಶೇಕಡಾ 8 ರಷ್ಟನ್ನು ಅನುಷ್ಠಾನಕ್ಕೆ ತರುವಲ್ಲಿ ವಿಳಂಬ ಧೋರಣೆ ತಾಳಿರುವ ಕುರಿತು ನಿಯಮ 72ರಡಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರ ಕಂಡಿಕೆ 3 ರಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿರುವ ಸಿವಿಲ್ ಸೇವಾ ಹುದ್ದೆಗಳಲ್ಲಿನ ಗ್ರೂಪ್-ಎ (ಕಿರಿಯ ಶ್ರೇಣಿ) ಮತ್ತು ಗ್ರೂಪ್-ಬಿ ಹುದ್ದೆಗಳಲ್ಲಿ ಶೇ 75 ರಷ್ಟು ಹುದ್ದೆಗಳನ್ನು, ಗ್ರೂಪ್-ಸಿ ಹುದ್ದೆಗಳಲ್ಲಿ ಶೇ 80 ರಷ್ಟು ಹಾಗೂ ಗ್ರೂಪ್-ಡಿ ಹುದ್ದೆಗಳಲ್ಲಿ ಶೇ 85ರಷ್ಟು ಹುದ್ದೆಗಳನ್ನು ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಹಾಗೆಯೇ ಮೇಲಿನ ಆದೇಶದ ಕಂಡಿಕೆ 13ರಲ್ಲಿ ರಾಜ್ಯ ಮಟ್ಟದ ಕಛೇರಿ ಮತ್ತು ಸಂಸ್ಥೆಗಳಲ್ಲಿನ ಎಲ್ಲಾ ವೃಂದದ ಹುದ್ದೆಗಳಲ್ಲಿ ಶೇ 8 ರಷ್ಟು ಹುದ್ದೆಗಳನ್ನು ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ ಬಹುತೇಕ ಎಲ್ಲಾ ಇಲಾಖೆಗಳಲ್ಲಿ ಈಗಾಗಲೇ ಮೀಸಲಾತಿ ನಿಗಧಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಯಾವುದೇ ಇಲಾಖೆಯಲ್ಲಿ ಮೇಲಿನ ಅವಕಾಶದಂತೆ ಮೀಸಲಾತಿ ನಿಗಧಿಪಡಿಸದೇ ಇರುವ ಬಗ್ಗೆ ದೂರು ಸ್ವೀಕೃತವಾದಲ್ಲಿ ಅಂತಹ ಇಲಾಖೆಗಳಿಂದ ವರದಿ ಪಡೆದು ಮೀಸಲಾತಿ ನಿಗಧಿಪಡಿಸುವಂತೆ ನಿರ್ದೇಶನ ನೀಡಲಾಗುತ್ತಿದೆ.

ಪ್ರಸ್ತುತ ಮಾನ್ಯ ಸದಸ್ಯರು ಕೋರಿರುವಂತೆ ಹೈದ್ರಾಬಾದ್-ಕರ್ನಾಟಕ ಭಾಗದ ಎಲ್ಲಾ ಇಲಾಖೆಗಳಲ್ಲಿನ ಹುದ್ದೆಗಳಲ್ಲಿ ಶೇ 100 ರಷ್ಟು ಹುದ್ದೆಗಳನ್ನು ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸುವ ಹಾಗೂ ಹೈದ್ರಾಬಾದ್-ಕರ್ನಾಟಕ ಹೊರತು ಪಡಿಸಿ ಉಳಿದ ಎಲ್ಲಾ ಜಿಲ್ಲೆಗಳಲ್ಲಿ ಶೇ 8 ರಷ್ಟು ಹುದ್ದೆಗಳನ್ನು ಮೀಸಲಿರಿಸಲು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಸಂಖ್ಯೆ: ಸಿಆಸುಇ 36 ಹೈಕಕೋ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ